प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

संचार विभाग, केंद्रीय कार्यालय, शहीद भगत सिंह मार्ग, फोर्ट, मुंबई - 400 001
Department of Communication, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

20 ನವೆಂಬರ್ 2025

**ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ್ ನಿಯಮಿತ, ಬಾಗಲಕೋಟೆ, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ನವೆಂಬರ್ 12, 2025 ರ ಆದೇಶದ ಮೂಲಕ 'ಆದಾಯ ಗುರುತಿಸುವಿಕೆ, ಆಸ್ತಿ ವರ್ಗೀಕರಣ, ಅವಕಾಶ ಕಲ್ಪಿಸುವುದು ಮತ್ತು ಇತರ ಸಂಬಂಧಿತ ವಿಷಯಗಳು- ಪೌರ ಸಹಕಾರಿ ಬ್ಯಾಂಕುಗಳು' ಮತ್ತು 'ಭಾರತೀಯ ರಿಸರ್ವ್ ಬ್ಯಾಂಕ್- (ಸಹಕಾರ ಬ್ಯಾಂಕುಗಳು -ಠೇವಣಿಗಳ ಮೇಲೆ ಬಡ್ಡಿ ದರ) ನಿರ್ದೇಶನಗಳು, 2016' ಕುರಿತಾಗಿ ನೀಡಿದ್ದ ಕೆಲವು ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ್ ನಿಯಮಿತ, ಬಾಗಲಕೋಟೆ, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 1 ಲಕ್ಷ ( ರೂ. ಒಂದು ಲಕ್ಷ ಮಾತ್ರ ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಿತ್ತು. ಭಾರತೀಯ ರಿಸರ್ವ್ ಬ್ಯಾಂಕ್ ನೀಡಿದ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಮೇಲೆ ಹೇಳಿದ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಈ ಕೆಳಗಿನ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಬ್ಯಾಂಕು:

i. ಆದಾಯ ಗುರುತಿಸುವಿಕೆ, ಆಸ್ತಿ ವರ್ಗೀಕರಣ, ಅವಕಾಶ ಕಲ್ಪಿಸುವ ಸೂತ್ರಗಳ ಪ್ರಕಾರ ಕೆಲವು ಸಾಲ ಖಾತೆಗಳನ್ನು "ನಿಷ್ಕ್ರಿಯ ಆಸ್ತಿ (NPA)" ಎಂದು ವರ್ಗೀಕರಿಸುವಲ್ಲಿ ವಿಫಲವಾಗಿತ್ತು : ಮತ್ತು

ii. ಅನರ್ಹ ಸಂಸ್ಥೆಗಳ ಹೆಸರಿನಲ್ಲಿ ಕೆಲವು ಉಳಿತಾಯ ಠೇವಣಿ ಖಾತೆಗಳನ್ನು ತೆರೆದಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಬ್ರಿಜ್ ರಾಜ್)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2025-2026/1537**